**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಎನ್ ಸ್ವಾಮಿ ಲಿಂಗಪ್ಪ, ಕಾರ್ಯದರ್ಶಿ ಗ್ರೇಡ್–1 ಹಾಗೂ ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೆಬ್ಬಾಳ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂಖ್ಯೆ:Compt/Uplok/BD/2316/2021/PO ARE-01, ದಿನಾಂಕ:04.03.2022.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ದಿನಾಂಕ:14/16.02.2022 ರಂದು ಸಲ್ಲಿಸಿರುವ ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ಶ್ರೀ ಎನ್.ಸ್ವಾಮಿ ಲಿಂಗಪ್ಪ, ಕಾರ್ಯದರ್ಶಿ ಗ್ರೇಡ್–1 ಪ್ರಭಾರಿ ಪಿ.ಡಿ.ಓ, ಹೆಬ್ಬಾಳ ಗ್ರಾಮ ಪಂಚಾಯತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಶ್ರೀ ಬಸವರಾಜ್, ಬಿನ್ ಲೇಟ್ ಲಕ್ಕಪ, ನಂ: 383, 2ನೇ ಮೇನ್, ಡಿಸಿಎಂ, ದಾವಣಗೆರೆ ಇವರು ದೂರು ಸಲ್ಲಿಸಿದ್ದು, ದೂರುದಾರರು ತಮ್ಮ ಪತ್ನಿಯಾದ ಶ್ರೀಮತಿ ಕುಸುಮಾ ಬಿ.ಹೆಚ್. ರವರ ಹೆಸರಿನಲ್ಲಿ ದಾವಣಗೆರೆ ತಾಲ್ಲೂಕು, ಹೆಬ್ಬಾಳು ಗ್ರಾಮದ ಸರ್ವೆ 245 ರಲ್ಲಿ 3 ಎಕರೆ ಜಮೀನು ಇದ್ದು, ಇದರಲ್ಲಿ 2 ಎಕರೆ ಜಮೀನು ವ್ಯವಸಾಯೇತರ ಭೂಪರಿವರ್ತನೆ ಮಾಡಲಾಗಿದ್ದು, ಅದರಲ್ಲಿ ಮೆ: ಬಸವರಾಜ ಆಗ್ರೋ ಫುಡ್, ಮೆಕ್ಕೆಜೋಳ ತುಂಡು ಮಾಡುವ ಕೈಗಾರಿಕಾ ಘಟಕವನ್ನು ಸ್ಥಾಪನೆ ಮಾಡುವ ಸಲುವಾಗಿ, ಹೆಬ್ಬಾಳು ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರಿಗೆ ಜನರಲ್ ಲೈಸೆನ್ಸ್, ಈ–ಸ್ವತ್ತು ಹಾಗೂ ಪ್ಲಾನ್ ಅಪ್ರೂವಲ್ ನೀಡಲು ಲಂಚಕ್ಕೆ ಬೇಡಿಕೆ ಇರಿಸಿ ಸರ್ಕಾರಿ ನೌಕರನಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು, ಭ್ರಷ್ಟಾಚಾರವೆಸಗಿದ್ದಾರೆ ಎನ್ನಲಾದ ಆಪಾದನೆಗಳ ಬಗ್ಗೆ ದೂರು ಸಲ್ಲಿಸಿದ್ದು, ಸದರಿ ನೌಕರರು ಸರ್ಕಾರಿ ಕೆಲಸಕ್ಕೆ ಲಂಚದ ಹಣದ ಬೇಡಿಕೆ ಇಟ್ಟು ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆಂದು ತಿಳಿಸಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ ನಿರ್ಧರಿಸಿದೆ, ಅದರಂತೆ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/45/ಗ್ರಾಪಂಕಾ/2022, ಬೆಂಗಳೂರು, ದಿನಾಂಕ:14.07.2022**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎನ್ ಸ್ವಾಮಿ ಲಿಂಗಪ್ಪ, ಕಾರ್ಯದರ್ಶಿ ಗ್ರೇಡ್–1 ಹಾಗೂ ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೆಬ್ಬಾಳ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 11ರ ಅನುಸಾರ ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

...2

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಶ್ರೀ ಎನ್ ಸ್ವಾಮಿ ಲಿಂಗಪ್ಪ, ಕಾ ಗ್ರೇಡ್–1 ಹಾಗೂ ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೆಬ್ಬಾಳ ಗ್ರಾಮ ಪಂಚಾಯಿತಿ, ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರ ಮೇಲ್ಮನವಿ) ನಿಯಮಗಳು 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸ
ಮತ್ತು ಅವರ ಹೆಸರಿನಲ್ಲಿ,

B. Naveenkumar
(ಬಿ.ನವೀನ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇ

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ದಾವಣಗೆರೆ ತಾಲ್ಲೂಕು, ದಾವಣ
**(ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋ**
6) ಶ್ರೀ ಎನ್ ಸ್ವಾಮಿ ಲಿಂಗಪ್ಪ, ಕಾರ್ಯದರ್ಶಿ ಗ್ರೇಡ್–1 ಹಾಗೂ ಪ್ರಭಾರಿ ಪಂಚಾಯಿತಿ ಅಧಿಕಾರಿ, ಹೆಬ್ಬಾಳ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ.
7) ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

******